**Akashvani : Bangalore**
**National Bulletin In Kannada**
**14.05.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.05.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಏಳನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅಂತ್ಯ; ೫೭ ಕ್ಷೇತ್ರಗಳಿಗೆ ಜೂನ್ ೧ ರಂದು ಮತದಾನ

೨. ವಾರಾಣಸಿ ಲೋಕಸಭಾ ಕ್ಷೇತ್ರದಿಂದ ಮೂರನೇ ಬಾರಿಗೆ ಆಯ್ಕೆ ಬಯಸಿ, ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ನಾಮಪತ್ರ ಸಲ್ಲಿಕೆ

೩. ಉತ್ತರಪ್ರದೇಶದಲ್ಲಿ ಪ್ರಮುಖ ರಾಜಕೀಯ ಪಕ್ಷಗಳ ನೇತಾರರಿಂದ ಬಿರುಸಿನ ಪ್ರಚಾರ

೪. ಎಲ್‌ಟಿಟಿಇ ಸಂಘಟನೆ ಮೇಲಿನ ನಿಷೇಧ ಇನ್ನೂ ಐದು ವರ್ಷ ಮುಂದುವರಿಕೆಗೆ ಕೇಂದ್ರದ ನಿರ್ಧಾರ

೫. ಐಪಿಎಲ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ -ಲಖನೌ ಸೂಪರ್ ಜೈಂಟ್ಸ್ ಹಣಾಹಣಿ

**<><*<><>*><>**

ಏಳನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮುಕ್ತಾಯವಾಗಿದೆ. ಉಮೇದುವಾರಿಕೆ ಸಲ್ಲಿಕೆಗೆ ಇಂದು ಕೊನೆದಿನವಾಗಿತ್ತು. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಒಂದು ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಉತ್ತರಪ್ರದೇಶ ಮತ್ತು ಪಂಜಾಬ್ ತಲಾ ೧೩, ಪಶ್ಚಿಮ ಬಂಗಾಳದ ೯, ಬಿಹಾರದ ೮, ಒಡಿಶಾದ ೬, ಹಿಮಾಚಲ ಪ್ರದೇಶದ ೪, ಜಾರ್ಖಂಡ್‌ನ ೩ ಹಾಗೂ ಕೇಂದ್ರಾಡಳಿತ ಪ್ರದೇಶ ಚಂಡೀಗಢದ ೧ ಕ್ಷೇತ್ರಗಳಿಗೆ ಜೂನ್ ೧ ರಂದು ಮತದಾನ ನಡೆಯಲಿದೆ. ನಾಮಪತ್ರಗಳ ಪರಿಶೀಲನೆ ನಾಳೆ ನಡೆಯಲಿದ್ದು, ನಾಮಪತ್ರ ಹಿಂಪಡೆಯಲು ಶುಕ್ರವಾರ ಕಡೆಯದಿನವಾಗಿದೆ.

**<><*<><>*><>**

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ, ತಮ್ಮ ಸ್ವಕ್ಷೇತ್ರ ವಾರಾಣಸಿ ಲೋಕಸಭಾ ಕ್ಷೇತ್ರದಿಂದ ಮರು ಆಯ್ಕೆ ಬಯಸಿ ಇಂದು ನಾಮಪತ್ರ ಸಲ್ಲಿಸಿದರು. ೭ ನೇ ಹಾಗೂ ಕೊನೆಯ ಹಂತದ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ವಾರಾಣಸಿಯಲ್ಲೂ ಮತದಾನ ನಡೆಯಲಿದೆ. ಈ ಹಂತದ ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಲು ಇಂದು ಕೊನೆಯದಿನವಾಗಿತ್ತು. ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಮಪತ್ರ ಸಲ್ಲಿಕೆಗೂ ಮುನ್ನ ಗಂಗಾ ನದಿಯಲ್ಲಿ ಸ್ನಾನ ಮಾಡಿ, ನಂತರ

ಕಾಲಭೈರವ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದರು. ಪ್ರಧಾನಿ, ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಎನ್‌ಡಿಯ ಮೈತ್ರಿಕೂಟದ ನಾಯಕರಾದ ಚಂದ್ರಬಾಬು ನಾಯ್ಡು, ಏಕನಾಥ್ ಶಿಂಧೆ, ಯೋಗಿ ಆದಿತ್ಯನಾಥ್ ಜಿತಿನ್ ರಾಮ್ ಮಾಂಜಿ, ಸಂಜಯ್ ನಿಶಾದ್, ರಾಮದಾಸ್ ಅಠಾವಳೆ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಪಕ್ಷದ ಹಿರಿಯ ಮುಖಂಡರಾದ ಅಮಿತ್ ಶಾ, ರಾಜನಾಥ್ ಸಿಂಗ್, ಹರ್ದೀಪ್ ಸಿಂಗ್ ಪುರಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಪ್ರಧಾನಿಯವರ ನಾಮಪತ್ರಕ್ಕೆ ಸೂಚಕರಾಗಿ ಸಹಿ ಮಾಡಿರುವ ಪಂಡಿತ್ ಗಣೇಶ್ವರ್ ಶಾಸ್ತ್ರಿ, ಬೈಜನಾಥ್ ಪಟೇಲ್, ಲಾಲ್‌ಚಂದ್ ಕುಶ್ವಾಹ ಮತ್ತು ಸಂಜಯ್ ಸೋಂಕಾರ್ ಉಪಸ್ಥಿತರಿದ್ದರು. ಪ್ರತಿಪಕ್ಷ ಇಂಡಿ ಮೈತ್ರಿಕೂಟದ ಅಭ್ಯರ್ಥಿಯಾಗಿ ಕಾಂಗ್ರೆಸ್‌ನ ಅಜಯ್ ರಾಯ್, ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಸ್ಪರ್ಧಿಸಿದ್ದಾರೆ. ಉತ್ತರಪ್ರದೇಶದ ಕಾಂಗ್ರೆಸ್ ಘಟಕದ ಮುಖ್ಯಸ್ಥರಾಗಿರುವ ಅಜಯ್ ರಾಯ್, ನರೇಂದ್ರ ಮೋದಿ ವಿರುದ್ಧ ೨೦೧೪ ಮತ್ತು ೨೦೧೯ ರಲ್ಲಿ ಸ್ಪರ್ಧಿಸಿ ಪರಾಭಗೊಂಡಿದ್ದರು. ೨೦೧೯ರಲ್ಲಿ ಸಮಾಜವಾದಿ ಪಕ್ಷದ ಶಾಲಿನ ಯಾದವ್ ನರೇಂದ್ರ ಮೋದಿ ವಿರುದ್ಧ ಸ್ಪರ್ಧಿಸಿ ಸೋಲನುಭವಿಸಿದ್ದರು. ಈ ಚುನಾವಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಶಾಲಿನಿ ಯಾದವ್ ವಿರುದ್ಧ ೪ ಲಕ್ಷದ ೭೯ ಸಾವಿರಕ್ಕೂ ಅಧಿಕ ಮತದಿಂದ ಜಯಭೇರಿ ಬಾರಿಸಿದ್ದರು.

<><*<><>*><>

ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು, ಉತ್ತರ ಪ್ರದೇಶದಲ್ಲಿಂದು ತಮ್ಮ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ನಡೆಸಿದರು. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಅಮೇಥಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಹಾಗೂ ಕೇಂದ್ರ ಸಚಿವೆ ಸ್ಮೃತಿ ಇರಾನಿ ಪರವಾಗಿ ಮುನ್ಷಿಗಂಜ್‌ನಲ್ಲಿ ಸಾರ್ವಜನಿಕ ಸಭೆಯ ಮೂಲಕ ಮತಯಾಚನೆ ಮಾಡಿದರು. ಸ್ಮೃತಿ ಇರಾನಿ, ಕಾಂಗ್ರೆಸ್ ಕಿಶೋರಿಲಾಲ್ ಶರ್ಮಾ ಅವರ ವಿರುದ್ಧ ಸ್ಪರ್ಧಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಜೆ.ಪಿ.ನಡ್ಡಾ, ಕೊರೊನಾ ಸಂದರ್ಭದಲ್ಲಿ ದೇಶದ ಆರ್ಥಿಕ ಪರಿಸ್ಥಿತಿ ಉತ್ತಮವಾಗಿರಲಿಲ್ಲ. ಆದರೆ, ನಮ್ಮ ಸರ್ಕಾರ ಪರಿಸ್ಥಿತಿಯನ್ನು ನಿಭಾಯಿಸಿದ್ದು, ಯಾರೊಬ್ಬರೂ ಹಸಿವಿನಿಂದ ಬಳಲಬಾರದು ಎಂದು ತೀರ್ಮಾನಿಸಿ, ಉಚಿತ ಪಡಿತರ ವಿತರಣೆ ಮಾಡುವ ವಿಶ್ವದ ಅತಿದೊಡ್ಡ ಕಾರ್ಯಕ್ರಮವನ್ನು ಜಾರಿಗೊಳಿಸಿದೆ ಎಂದರು. ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅಮೇಥಿಯಲ್ಲಿ ನಡೆದ ರ್‍ಯಾಲಿಯಲ್ಲಿ ಪಾಲ್ಗೊಂಡು ಮಾತನಾಡಿದರು. ಮತ್ತೊಂದೆಡೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ, ಅಮೇಥಿಯಲ್ಲಿಂದು ಸಾರ್ವಜನಿಕ ಸಭೆಗಳ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ಮಾಡಿದರು. ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿಯವರ ಜೊತೆಗೂಡಿ ಝಾನ್ಸಿಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಪ್ರದೀಪ್ ಜೈನ್ ಪರ ಮತಯಾಚನೆ ಮಾಡಿದರು. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾಜುರ್ನ ಖರ್ಗೆ, ಗೋರಖ್‌ಪುರ ಸಮೀಪದ ಚೌರಿ ಚೌರಾ ಹಾಗೂ ಮಹಾರಾಜ್‌ಗಂಜ್‌ನಲ್ಲಿ ಏರ್ಪಡಿಸಿದ್ದ ರ್‍ಯಾಲಿಗಳಲ್ಲಿ ಭಾಗವಹಿಸಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ, ಕೃಷಿ ಕ್ಷೇತ್ರದ ಮೇಲಿನ ಜಿಎಸ್‌ಟಿ ರದ್ದುಪಡಿಸಲಾಗುತ್ತದೆ ಎಂದು ಹೇಳಿದರು.

<><*<><>*><>

ಲೋಕಸಭಾ ಚುನಾವಣೆಗಳಿಗೆ ಸಂಬಂಧಿಸಿದಂತೆ ಮಾದರಿ ನೀತಿ ಸಂಹಿತೆ ಜಾರಿಗೆ ಬಂದ ನಂತರ ದಾಖಲಾಗಿದ್ದ ಶೇಕಡ ೯೦ ಕ್ಕೂ ಹೆಚ್ಚು ದೂರುಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಬಿಜೆಪಿ ಮತ್ತು ಕಾಂಗ್ರೆಸ್ ಹೊರತುಪಡಿಸಿ, ಇತರ ಯಾವುದೇ ರಾಜಕೀಯ ಪಕ್ಷಗಳ ಪ್ರಮುಖ ದೂರುಗಳು ಬಾಕಿ ಉಳಿದಿಲ್ಲ ಎಂದು ಆಯೋಗ ಮಾಹಿತಿ ನೀಡಿದೆ. ವಿವಿಧ ರಾಜಕೀಯ ಪಕ್ಷಗಳು ಮತ್ತು ಅಭ್ಯರ್ಥಿಗಳಿಂದ ೪೨೫ ದೂರುಗಳು ದಾಖಲಾಗಿದ್ದವು. ಈ ಪೈಕಿ ೪೦೦ ದೂರುಗಳಿಗೆ ಸಂಬಂಧಿಸಿದಂತೆ ಕ್ರಮ ಕೈಗೊಳ್ಳಲಾಗಿದೆ ಅಥವಾ ವಿಲೇವಾರಿ ಮಾಡಲಾಗಿದೆ ಎಂದು ಆಯೋಗ ಬಿಡುಗಡೆ ಮಾಡಿರುವ ಹೇಳಿಕೆಯಲ್ಲಿ ತಿಳಿಸಿದೆ. ಕಾಂಗ್ರೆಸ್ ೧೭೦, ಬಿಜೆಪಿ ೯೫ ಹಾಗೂ ಇತರ ಪಕ್ಷಗಳಿಂದ ೧೬೦ ದೂರುಗಳು ಸಲ್ಲಿಕೆಯಾಗಿದ್ದವು ಎಂದು ಚುನಾವಣಾ ಆಯೋಗ ಹೇಳಿದೆ.

<><*<><>*><>

ಎಲ್‌ಟಿಟಿಇ ಸಂಘಟನೆ ಮೇಲೆ ಕೇಂದ್ರ ಸರ್ಕಾರ ಹೇರಿದ್ದ ನಿಷೇಧವನ್ನು ಇನ್ನೂ ಐದು ವರ್ಷಗಳ ಕಾಲ ವಿಸ್ತರಿಸಿದೆ. ಭಾರತದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಐಕ್ಯತೆಗೆ ಬೆದರಿಕೆ ಒಡ್ಡುವ ಚಟುವಟಿಕೆಗಳಲ್ಲಿ ಎಲ್‌ಟಿಟಿಇ ಭಾಗಿಯಾಗಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಕೇಂದ್ರ ಗೃಹ ಸಚಿವಾಲಯ, ಬಿಡುಗಡೆ ಮಾಡಿರುವ ಅಧಿಸೂಚನೆಯಲ್ಲಿ ಈ ವಿಷಯವನ್ನು ತಿಳಿಸಲಾಗಿದೆ. ವಿಧ್ವಂಸಕ, ಪ್ರತ್ಯೇಕತಾವಾದಿ ಮತ್ತಿತರ ಚಟುವಟಿಕೆಗಳಲ್ಲಿ ಭಾಗಿಯಾಗುವ ಮೂಲಕ ಎಲ್‌ಟಿಟಿಇ, ಭಾರತದ ಪ್ರಜೆಗಳ ಭದ್ರತೆಗೆ ಧಕ್ಕೆ ಉಂಟು ಮಾಡುವ ಯತ್ನ ಮುಂದುವರಿಸಿದ್ದು, ಈ ಸಂಘಟನೆ ನಿಷೇಧಕ್ಕೆ ಕಾರಣವಾಗಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ೨೦೧೯ರ ಮೇ ತಿಂಗಳಲ್ಲಿ ಕೇಂದ್ರ ಸರ್ಕಾರ, ಎಲ್‌ಟಿಟಿಇ ಕಾನೂನು ಬಾಹಿರ ಸಂಘಟನೆ ಎಂದು ಘೋಷಣೆ ಮಾಡಿ, ಐದು ವರ್ಷಗಳ ಕಾಲ ನಿಷೇಧವನ್ನು ಹೇರಲಾಗಿತ್ತು.

<><*<><>*><>

ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಸೆಹ್‌ಗಲ್, ಇಂದು ನವದೆಹಲಿಯ ಆಕಾಶವಾಣಿ ಕೇಂದ್ರ ಕಚೇರಿಗೆ ಭೇಟಿ ನೀಡಿ, ಅಲ್ಲಿನ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು. ಸೆಹ್‌ಗಲ್ ಅವರು, ಸುದ್ದಿ ಸೇವೆಗಳ ವಿಭಾಗ, ಕಾರ್ಯಕ್ರಮ ಹಾಗೂ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಾಚರಣೆ ಮತ್ತು ಎದುರಿಸುತ್ತಿರುವ ಸವಾಲುಗಳು ಕುರಿತು ಅಧಿಕಾರಿಗಳೊಂದಿಗೆ ವಿವರವಾಗಿ ಚರ್ಚಿಸಿದರು. ಗುಣಮಟ್ಟದ ಕಾರ್ಯಕ್ರಮಗಳನ್ನು ಬಿತ್ತರಗೊಳಿಸುವ ನಿಟ್ಟಿನಲ್ಲಿಕೈಗೊಳಬೇಕಾದ ಸುಧಾರಣೆಗಳ ಬಗ್ಗೆ ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

<><*<><>*><>

ಭಾರತದ ಪುರಾತನ ಅರೆಸೇನೆ ಪಡೆಯಾಗಿರುವ ಅಸ್ಸಾಂ ರೈಫಲ್ಸ್, ಇದೇ ತಿಂಗಳ ೧೮ರಂದು ಕಾಲಿಮ್‌ಪೊಂಗ್‌ನಲ್ಲಿ ನಿವೃತ್ತ ಯೋಧರ ರ‍್ಯಾಲಿಯನ್ನು ಏರ್ಪಡಿಸಿದೆ. ’ನಮಗಾಗಿ ಸೇವೆ ಸಲ್ಲಿಸಿದವರಿಗೆ ಸೇವೆ ಮಾಡುವುದು’ ಎಂಬ ಹೆಸರಿನ ಈ ರ‍್ಯಾಲಿ ಸಂದರ್ಭದಲ್ಲಿ ಪಶ್ಚಿಮ ಬಂಗಾಳ, ಸಿಕ್ಕಿಂ ಮತ್ತು ಈಶಾನ್ಯ ರಾಜ್ಯಗಳ ನಿವೃತ್ತ ಯೋಧರನ್ನು ಗೌರವಿಸಲಾಗುವುದು ಮತ್ತು ಅವರಿಗೆ ಬೆಂಬಲ ಸೂಚಿಸುವ ನಿರ್ಣಯ ಕೈಗೊಳ್ಳಲಾಗುವುದು. ಅಸ್ಸಾಂ ರೈಫಲ್ಸ್‌ನ ಲೆಫ್ಟಿನೆಂಟ್ ಜನರಲ್ ಪಿ.ಸಿ.ನಾಯರ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><*<><>*><>

ನೋಬೆಲ್ ಪ್ರಶಸ್ತಿ ಪುರಸ್ಕೃತ ರವೀಂದ್ರನಾಥ್ ಠಾಗೂರ್, ಅವರ ಅಪರೂಪದ ಭಾವಚಿತ್ರಗಳು ಮತ್ತು ಕಲಾಕೃತಿಗಳ ಪ್ರದರ್ಶನವನ್ನು ನವದೆಹಲಿಯಲ್ಲಿ ಏರ್ಪಡಿಸಲಾಗಿದೆ. ಇಂದಿರಾ ಗಾಂಧಿ ರಾಷ್ಟ್ರೀಯ ಕಲಾಕೇಂದ್ರ, ಈ ಪ್ರದರ್ಶನವನ್ನು ಆಯೋಜಿಸಿದ್ದು, ಹತ್ತು ದಿನಗಳ ಪ್ರದರ್ಶನ ಸಾರ್ವಜನಿಕರ ವೀಕ್ಷಣೆಗೆ ಉಚಿತ ಪ್ರವೇಶ ಸೌಲಭ್ಯ ಕಲ್ಪಿಸಲಾಗಿದೆ.

<><*<><>*><>

ನೆದರ್‌ಲ್ಯಾಂಡ್ಸ್‌ನ ರೊಟ್ಟೆರ್‌ಡ್ಯಾಮ್‌ನಲ್ಲಿ ನಡೆಯುತ್ತಿರುವ ವರ್ಲ್ಡ್ ಹೈಡ್ರೋಜನ್ ಶೃಂಗಸಭೆ-೨೦೨೪ ರಲ್ಲಿ ಇದೇ ಮೊದಲ ಬಾರಿಗೆ ಭಾರತ ತನ್ನ ಮಳಿಗೆಯನ್ನು ಪ್ರಾರಂಭಿಸಿದೆ. ಕೇಂದ್ರ ಸರ್ಕಾರದ ನವೀಕರಿಸಬಹುದಾದ ಇಂಧನ ಸಚಿವಾಲಯದ ಕಾರ್ಯದರ್ಶಿ ಭೂಪಿಂದರ್.ಎಸ್ ಭಲ್ಲಾ ಈ ಮಳಿಗೆಯನ್ನು ಉದ್ಘಾಟಿಸಿದರು. ಹಸಿರು ಇಂಧನ ಕ್ಷೇತ್ರದಲ್ಲಿ ಭಾರತ ಸಾಧಿಸಿರುವ ಪ್ರಗತಿ ಕುರಿತು ಮಳಿಗೆಯಲ್ಲಿ ಪ್ರದರ್ಶಿಸಲಾಗುತ್ತಿದೆ. ಈ ಶೃಂಗಸಭೆಯಲ್ಲಿ ವಿಶ್ವಾದ್ಯಂತ ಸುಮಾರು ೧೫ ಸಾವಿರ ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ. ೨೦೩೦ ರ ವೇಳೆಗೆ ೫ ದಶಲಕ್ಷ ಮೆಟ್ರಿಕ್ ಟನ್‌ನಷ್ಟು ಹಸಿರು ಇಂಧನ ಉತ್ಪಾದನೆ ಮಾಡಬೇಕೆಂಬ ಗುರಿಯೊಂದಿಗೆ ಭಾರತ, ಕಳೆದ ಜನವರಿಯಲ್ಲಿ ನ್ಯಾಷನಲ್ ಗ್ರೀನ್ ಹೈಡ್ರೋಜನ್ ಮಿಷನ್ ಅನ್ನು ಆರಂಭಿಸಿದೆ.

<><*<><>*><>

ಪ್ರವಾಹ ಪೀಡಿತ ಕೀನ್ಯಾದಲ್ಲಿ ಸಂತ್ರಸ್ತರ ನೆರವಿಗಾಗಿ ಭಾರತ, ಮಾನವೀಯ ನೆರವನ್ನು ನೀಡುವುದನ್ನು ಮುಂದುವರಿಸಿದೆ. ಎರಡನೇ ಹಂತದಲ್ಲಿ ಭಾರತೀಯ ವಾಯುಪಡೆಯ ವಿಶೇಷ ವಿಮಾನದ ಮೂಲಕ ೪೦ ಟನ್‌ಗಳಷ್ಟು ಔಷಧ ಹಾಗೂ ಅದಕ್ಕೆ ಸಂಬಂಧಿಸಿದ ಉಪಕರಣಗಳನ್ನು ಭಾರತ ಕೀನ್ಯಾ ದೇಶಕ್ಕೆ ಕಳುಹಿಸಿಕೊಟ್ಟಿದೆ. ಇದಲ್ಲದೆ, ಭಾರತ, ಕೀನ್ಯಾಕ್ಕೆ ಡೇರೆಗಳು, ರಗ್ಗುಗಳು, ವಿದ್ಯುತ್ ಉತ್ಪಾದನಾ ಸೆಟ್‌ಗಳು ಸೇರಿದಂತೆ ಆಹಾರ ಮತ್ತಿತರ ಪದಾರ್ಥಗಳನ್ನು ಕಳುಹಿಸಿಕೊಡಲಾಗಿದೆ. ಇದಕ್ಕೂ ಮುನ್ನ ನೌಕಾಪಡೆ ಸುಮೇಧಾ ಮೂಲಕ ಕಳುಹಿಸಿಕೊಡಲಾಗಿದ್ದ ನೆರವನ್ನು ಇದೇ ತಿಂಗಳ ೧೦ ರಂದು ಕೀನ್ಯಾ ಸರ್ಕಾರಕ್ಕೆ ತಲುಪಿಸಲಾಗಿದೆ. ಈ ಸಂದರ್ಭದಲ್ಲಿ ಸಂತ್ರಸ್ತರ ನೆರವಿಗಾಗಿ ಆಹಾರ, ಔಷಧೋಪಕರಣ ಮತ್ತಿತರ ವಸ್ತುಗಳನ್ನು ಕಳುಹಿಸಿಕೊಡಲಾಗಿತ್ತು. ಭಾರೀ ಮಳೆಯಿಂದ ಉಂಟಾದ ಪ್ರವಾಹ ಪೀಡಿತ ಕೀನ್ಯಾದಲ್ಲಿ ೨೬೭ ಮಂದಿ ಮೃತಪಟ್ಟಿದ್ದು, ೧೮೮ ಜನ ಗಾಯಗೊಂಡಿದ್ದಾರೆ. ಸುಮಾರು ೨ ಲಕ್ಷಕ್ಕೂ ಅಧಿಕ ಜನರನ್ನು ಸ್ಥಳಾಂತರ ಮಾಡಲಾಗಿದೆ. ಕೀನ್ಯಾ ದೇಶದೊಂದಿಗೆ ಸಂಬಂಧ ವೃದ್ಧಿಗೆ ಪೂರಕವಾಗಿ ಭಾರತ ನೆರವು ನೀಡಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<><*<><>*><>

೭೭ನೇ ಕೇನ್ಸ್ ಚಲನಚಿತ್ರೋತ್ಸವ ಫ್ರಾನ್ಸ್‌ನ ಕೇನ್ಸ್‌ನಲ್ಲಿಂದು ಆರಂಭವಾಗಿದೆ. ೧೨ ದಿನಗಳ ಈ ಉತ್ಸವದಲ್ಲಿ ಭಾರತ ಭಾಗಿಯಾಗಿದೆ. ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳು ಮತ್ತು ಚಿತ್ರೋದ್ಯಮದ ಪ್ರತಿನಿಧಿಗಳನ್ನು ಒಳಗೊಂಡ ಭಾರತದ ನಿಯೋಗ ಉತ್ಸವದಲ್ಲಿ ಪಾಲ್ಗೊಂಡಿದೆ. ಭಾರತ, ಇದೇ ಮೊದಲ ಬಾರಿಗೆ ಕೇನ್ಸ್ ಚಲನಚಿತ್ರೋತ್ಸವದಲ್ಲಿ ಭಾರತ್ ಪರ್ವ್ ಎಂಬ ಕಾರ್ಯಕ್ರಮವನ್ನು ಆಯೋಜಿಸಲಿದೆ. ಕೇನ್ಸ್‌ನಲ್ಲಿ ಭಾರತದ ವೇದಿಕೆಯನ್ನು ಪ್ರಾರಂಭ ಮಾಡುವುದರಿಂದ ಭಾರತದ

ಚಲನಚಿತ್ರೋದ್ಯಮದ ಸಮುದಾಯ ವಿವಿಧ ಚಟುವಟಿಕೆಗಳನ್ನು ನಡೆಸಲು ಸಹಕಾರಿಯಾಗಲಿದೆ. ಭಾರತ್ ಪರ್ವ್‌ದಲ್ಲಿ ೫೫ನೇ ಭಾರತೀಯ ಅಂತಾರಾಷ್ಟ್ರೀಯ ಚಲಚಿತ್ರೋತ್ಸವ-೨೦೨೪ರ ಅಧಿಕೃತ ಪೋಸ್ಟರ್ ಮತ್ತು ಟ್ರೈಲರ್ ಬಿಡುಗಡೆಯಾಗಲಿದೆ. ಈ ವರ್ಷದ ಭಾರತೀಯ ಅಂತಾರಾಷ್ಟ್ರೀಯ ಚಲಚಿತ್ರೋತ್ಸವ ಬರುವ ನವೆಂಬರ್ ೨೦ ರಿಂದ ೨೮ ರವರೆಗೆ ಗೋವಾದಲ್ಲಿ ನಡೆಯಲಿದೆ.

**<><*<><>*><>**

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಸೆಣಸುತ್ತಿವೆ. ಟಾಸ್ ಗೆದ್ದ ಲಖನೌ ಸೂಪರ್ ಜೈಂಟ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೬.೦೫ ಕ್ಕೆ **<>*><>**